# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,

## ಸಹಾಯಕ ಕಾರ್ಯಪಾಲಕ ಅಭಿಯಂತರರು, ಯಲಹಂಕ ಉಪ ವಿಭಾಗ

## ಕೆಂಪೇಗೌಡ ವಾರ್ಡ್ ನಂ-01ರಲ್ಲಿ ದಿನಾಂಕ: 21-08-2021. ರಂದು ನಡೆದ

## ಸಮಿತಿ ಸಭಾ ನಡವಳಿ.

ಕೆಳಕಂಡ ಸದಸ್ಯರು ಹಾಗೂ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿರುತ್ತಾರೆ.

1. ಶ್ರೀ.ರಜನಿಕಾಂತ್ ಮಳ್ಳಿ, ನೋಡಲ್ ಅಧಿಕಾರಿಗಳು.
2. ಶ್ರೀ.ಮಲ್ಲಿನಾಥ ಮಲ್ಕಾಪುರ, ಸಹಾಯಕ ಅಭಿಯಂತರರು ಹಾಗೂ ಕಾರ್ಯದರ್ಶಿ.
3. ಶ್ರೀ.ಬಾಬರೆಡ್ಡಿ, ಸಹಾಯಕ ಅಭಿಯಂತರರು (ವಿದ್ಯುತ್ ವಿಭಾಗ),
4. ಶಶಿಕುಮಾರ್ ಸಹಾಯಕ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ
5. ಶ್ರೀ.ವಿವೇಕ್, ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ-01.

ವಾರ್ಡ್ ಸಮಿತಿಯ ಪ್ರಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ನೋಡೆಲ್ ಅಧಿಕಾರಿಗಳು ಹಾಗೂ ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ನಡೆಸಲು ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳನ್ನು ಕೋರಲಾಯಿತು.

1. ಕೆಂಪೇಗೌಡ ವಾರ್ಡ್ ನಂ-01ರ ಯಲಹಂಕ ಓಲ್ಡ್ ಟೌನ್ ಬಾಂಗ್ಲಾ ಶಾಲೆಯ ಹತ್ತಿರ ಡೌನ್ ಬಜಾರ್ ಹತ್ತಿರ ಮಳೆನೀರಿನಿಂದ ಚರಂಡಿಗಳಲ್ಲಿ ತುಂಬಿರುವ ಹೂಳನ್ನು ತೆಗೆದು ಸ್ವಚ್ಛಗೊಳಿಸಿರುವುದಾಗಿ ಉಳಿದ ಕೆಲಸಕ್ಕೆ ಸಂಬಂದಿಸಿದಂತೆ ಡೌನ್ ಬಜಾರ್ ರಸ್ತೆಯಲ್ಲಿ ಡಾಂಬರಿಕರಣ ಮಾಡಲು ಸಭೆಯಲ್ಲಿ ತಿರ್ಮಾನಿಸಲಾಯಿತು.

2. ಹಾಲಿ ವಾರ್ಡ್‌ಗಳ ವ್ಯಾಪ್ತಿಯಲ್ಲಿ ಹಬ್ಬ ಹರಿದಿನಗಳ ಸಮಯದಲ್ಲಿ ತಳ್ಳುವ ಗಾಡಿಗಳ ಮೂಲಕ ಪಾದಚಾರಿ ಮಾರ್ಗಗಳಲ್ಲಿ ಹಣ್ಣಿನ ಅಂಗಡಿಗಳ ವ್ಯಾಪಾರಿಗಳು ವ್ಯಾಪಾರ ಮಾಡುತ್ತಿದ್ದು, ಪಾದಚಾರಿ ಮಾರ್ಗಗಳಲ್ಲಿ ಸಾರ್ವಜನಿಕರು ಸರಾಗವಾಗಿ ಓಡಾಡಲು ಅನಾನುಕೂಲವಾಗಿರುವುದರಿಂದ ಸದರಿ ಅಂಗಡಿಗಳನ್ನು ತೆರವುಗೊಳಿಸಲು ಸಂಬಂದಿಸಿದ ಅಭಿಯಂತರರಿಗೆ ಹಾಗೂ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ನೋಡೆಲ್ ಅಧಿಕಾರಿಗಳು ಸೂಚಿಸಿದರು.

3. ವಾರ್ಡ್‌ಗಳ ವ್ಯಾಪ್ತಿಯಲ್ಲಿ ಕೊವಿಡ್ –19 ರ ಮುಂಜಾಗ್ರತ ಕ್ರಮಗಳನ್ನು ಕೈಗೊಳ್ಳಲು ಹಾಗೂ ವ್ಯಾಕ್ಸಿನ್ ಹಾಕಿಸಿಕೊಳ್ಳುವುದರ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು.

4. ವಾರ್ಡ್‌ನ ವ್ಯಾಪ್ತಿಯಲ್ಲಿರುವ ಮಾರುತಿನಗರ 1ನೇ ಮುಖ್ಯರಸ್ತೆಯಲ್ಲಿ ಬೀದಿ ದೀಪ ಉರಿಯುತ್ತಿರುವುದಿಲ್ಲ ಎಂದು ಸಾರ್ವಜನಿಕರು ದೂರು ನೀಡಿದ್ದು, ಸದರಿ ದೂರಿನನ್ವಯ ಸ್ಥಳ ಪರಿಶೀಲನೆ ಮಾಡಿ ಬೀದಿ ದೀಪ ರಿಪೇರಿ ಮಾಡಿಸಿಕೊಡಲು ನೋಡೆಲ್ ಅಧಿಕಾರಿಗಳು ಸೂಚಿಸಿದರು.

5. ವಾರ್ಡ್‌ಗಳ ವ್ಯಾಪ್ತಿಯಲ್ಲಿ ಘನತ್ಯಾಜ್ಯ ವಸ್ತುಗಳನ್ನು ಸಮರ್ಪಕವಾಗಿ ಸಂಗ್ರಹಣೆ ಹಾಗೂ ನಿರ್ವಹಣೆ ಮಾಡುವಂತೆ ಸಂಬಂಧಿಸಿದ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ನೋಡೆಲ್ ಅಧಿಕಾರಿಗಳು ಸಭೆಯಲ್ಲಿ ಸೂಚಿಸಿದರು.

ಮೇಲ್ಕಂಡ ಎಲ್ಲಾ ಅಂಶಗಳಿಗೂ ಕ್ರಮ ಕೈಗೊಳ್ಳಬೇಕಾದ ಎಲ್ಲಾ ಅಧಿಕಾರಿಗಳು ಸೂಕ್ತ ಕ್ರಮ ತೆಗೆದುಕೊಂಡು ಮುಂದಿನ ಸಭೆಗೆ ಪೂರ್ಣ ಮಾಹಿತಿಯೊಂದಿಗೆ ಎಲ್ಲಾ ಅಧಿಕಾರಿಗಳು ಹಾಜರಾಗಲು ಮಾನ್ಯ ನೋಡೆಲ್ ಅಧಿಕಾರಿಗಳು ಸಭೆಯಲ್ಲಿ ಸೂಚಿಸಿದರು. ಮುಂದಿನ ಸಭೆಯಲ್ಲಿ ಸಾಧಿಸಬೇಕಾದ ಗುರಿ ಹಾಗೂ ಸಾದನೆ ಬಗ್ಗೆ ಚರ್ಚಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ವಂದನಾರ್ಪಣೆಯೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.

| | |
|---|---|
| ಕಾರ್ಯದರ್ಶಿಗಳು/ ಸಹಾಯಕ ಅಭಿಯಂತರರು<br>ವಾರ್ಡ್ ಕಮಿಟಿ, ವಾರ್ಡ್ ನಂ. 01(ಕೆಂಪೇಗೌಡ)<br>01(ಕೆಂಪೇಗೌಢ) | ವಾರ್ಡ್‌ನ ನೋಡೆಲ್ ಅಧಿಕಾರಿಗಳು<br>ವಾರ್ಡ್ ಕಮಿಟಿ, ವಾರ್ಡ್ ನಂ. |

ಪ್ರತಿಯನ್ನು:

ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ಸದಸ್ಯರುಗಳ ಮಾಹಿತಿಗಾಗಿ.

1. ಶ್ರೀ.ರಜನಿಕಾಂತ್ ಮಳ್ಳಿ, ನೋಡಲ್ ಅಧಿಕಾರಿಗಳು.

ಅಧಿಕಾರಿಗಳ ಮಾಹಿತಿಗಾಗಿ.

1. ಮಾನ್ಯ ಜಂಟಿ ಆಯುಕ್ತರು ಯಲಹಂಕ ವಲಯರವರ ಮಾಹಿತಿಗಾಗಿ.
2. ಮಾನ್ಯ ಮುಖ್ಯ ಅಭಿಯಂತರರು ಯಲಹಂಕ ವಲಯರವರ ಮಾಹಿತಿಗಾಗಿ.
3. ಆರೋಗ್ಯ ವೈದ್ಯಾಧಿಕಾರಿಗಳು ಯಲಹಂಕ ವಲಯರವರ ಮಾಹಿತಿಗಾಗಿ.
4. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ರವರ ಸೂಕ್ತ ಕ್ರಮಕ್ಕಾಗಿ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ ವಿಭಾಗ ಬಿ.ಬಿ.ಎಂ.ಪಿ ರವರ ಸೂಕ್ತ ಕ್ರಮಕ್ಕಾಗಿ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, (ವಿದ್ಯುತ್) ಯಲಹಂಕರವರ ಸೂಕ್ತ ಕ್ರಮಕ್ಕಾಗಿ.